ಇ) ದಳಪತಿಗಳು ಗೌರವಾರ್ಥದಲ್ಲಿ ಕೆಲಸವನ್ನು ನಿರ್ವಹಿಸುತ್ತಿದ್ದಾರೆ, ಇವರುಗಳಿಗೆ ಸರ್ಕಾರದಿಂದ ಪ್ರಸ್ತುತ ಯಾವುದೇ ಸಂಭಾವನೆ ನೀಡುತ್ತಿಲ್ಲ.

ಗುಳೇದಗುಡ್ಡ ಮತ ಕ್ಷೇತ್ರದಲ್ಲಿ ಸೆಕೆಂಡ್ಸ್ ಮದ್ಯ ಮಾರಾಟ

3004:(4057)

ಶ್ರೀ ರಾಜಶೇಖರ ವಿ. ಶೀಲವಂತ (ಗುಳೇದಗುಡ್ಡ) ಮಾನ್ಯ ಅಬಕಾರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಳೇದಗುಡ್ಡ ಮತ ಕ್ಷೇತ್ರದಲ್ಲಿ ಸೆಕೆಂಡ್ಸ್ ಮದ್ಯ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದರೆ ಅದನ್ನು ತಡೆಯಲು ಸರ್ಕಾರದವರು ತೆಗೆದುಕೊಂಡಿರುವ ಕ್ರಮಗಳಾವುವು?

ಶ್ರೀ ಜಯವಂತ್ ಸುಬ್ರಾಯ (ಅಬಕಾರಿ ರಾಜ್ಯ ಸಚಿವರು):

ಅ) ಬಂದಿರುತ್ತದೆ.

ಆ) ಸದರಿ ಮತಕ್ಷೇತ್ರದಲ್ಲಿ ಅಬಕಾರಿ ಸಿಬ್ಬಂದಿಯವರು ದಾಳಿಯನ್ನು ಮಾಡುತ್ತಿದ್ದಾರೆ. ಹಾಗೂ 24 ಮೊಕದ್ದಮೆಗಳನ್ನು ದಾಖಲು ಮಾಡಿ 4011.320 ಲೀಟರ್ ಮದ್ಯವನ್ನು ಜಪ್ತಿ ಮಾಡಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ತನಿಖೆಯು ಮುಂದುವರೆಯುತ್ತಿದೆ. 5 ಜನರನ್ನು ದಸ್ತಿಗಿರಿ ಮಾಡಲಾಗಿದೆ. ಮತ್ತು ಒಂದು ಲಾರಿಯನ್ನು ಜಪ್ತಿ ಮಾಡಲಾಗಿದೆ.

ಗುಳೇದಗುಡ್ಡ ಮತಕ್ಷೇತ್ರದ ಅಸಂಗಿ ಗ್ರಾಮದ ಬಳಿ ಬ್ಯಾರೇಜ್ ನಿರ್ಮಾಣ

3005:(4056)

ಶ್ರೀ ರಾಜಶೇಖರ ವಿ. ಶೀಲವಂತ (ಗುಳೇದಗುಡ್ಡ): ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಳೇದಗುಡ್ಡ ಮತಕ್ಷೇತ್ರದ ಅಸಂಗಿ ಗ್ರಾಮದ ಹತ್ತಿರ ಬ್ಯಾರೇಜ್ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ?

ಆ) ಹಾಗಿದ್ದರೆ, ಈ ಯೋಜನೆಯ ಅಂದಾಜು ವೆಚ್ಚ ಎಷ್ಟು; ಈ ಕೆಲಸದ ಗುತ್ತಿಗೆಯನ್ನು ಯಾರಿಗೆ ವಹಿಸಿಕೊಡಲಾಗಿದೆ?

ಇ) ಪ್ರಸಕ್ತ ವರ್ಷದ ಮುಂಗಡ ಪತ್ರದಲ್ಲಿ ಇದಕ್ಕಾಗಿ ಕಾಯ್ದಿರಿಸಲಾದ ಹಣ ಎಷ್ಟು; ಹಾಗೂ ಯಾವಾಗ ಈ ಕೆಲಸವನ್ನು ಪೂರ್ಣಗೊಳಿಸಲಾಗುವುದು?

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು):

ಆ) ಇದೆ.

ಆ) ಈ ಯೋಜನೆಯ ಅಂದಾಜು ವೆಚ್ಚ ರೂ. 110.00 ಲಕ್ಷಗಳು. ಈ ಕೆಲಸದ ಗುತ್ತಿಗೆಯನ್ನು ಮೇ: ರಾಯಲ್ ಸೀಮಾ ಕನ್ಸಟ್ರಕ್ಷನ್ ಕಂಪನಿ, ಕಡಪಾ, ಆಂಧ್ರ ಪ್ರದೇಶ ಇವರಿಗೆ ವಹಿಸಿಕೊಡಲಾಗಿದೆ.

ಇ) ಪ್ರಸಕ್ತ 1998-99ನೇ ಆಯವ್ಯಯದಲ್ಲಿ ರೂ. 1.00 ಲಕ್ಷ ಅನುದಾನ ಕಾಯ್ದಿರಿಸಲಾಗಿದೆ. ಈ ಕೆಲಸವನ್ನು ಗುತ್ತಿಗೆಯ ಕರಾರಿನಂತೆ ದಿನಾಂಕ: 13-7-2000 1ರಂದು ಪೂರ್ಣಗೊಳಿಸಲು ಕಾರ್ಯಕ್ರಮವನ್ನು ಹಾಕಿಕೊಳ್ಳಲಾಗಿದೆ.

ಮೈಸೂರು ಜಿಲ್ಲೆಯಲ್ಲಿ ರೋಗಗ್ರಸ್ತ ಕಾರ್ಖಾನೆಗಳ ಪುನಶ್ಚೇತನ

3008:(3969)

ಶ್ರೀ ಎ.ರಾಮದಾಸ್ (ಕೃಷ್ಣರಾಜ): ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಸಂಪನ್ಮೂಲ ಅಭಿವೃದ್ಧಿ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಹೊಸದಾಗಿ ಪ್ರಾರಂಭವಾಗಿರುವ ಭಾರಿ ಮತ್ತು ಮಧ್ಯಮ ಕೈಗಾರಿಕೆಗಳ ಸಂಖ್ಯೆ ಎಷ್ಟು? ಅದರಿಂದ ಉದ್ಯೋಗ ಪಡೆದ ಕಾರ್ಮಿಕರ ಸಂಖ್ಯೆ ಎಷ್ಟು?

2. ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ ಮುಚ್ಚಿರುವ ರೋಗಗ್ರಸ್ಥ ಕಾರ್ಖಾನೆಗಳ ಸಂಖ್ಯೆ ಎಷ್ಟು; ಯಾವ ಯಾವ ಕಾರಣಗಳಿಗಾಗಿ ಈ ಕಾರ್ಖಾನೆಗಳನ್ನು ಮುಚ್ಚಲಾಗಿದೆ. ಇದರಿಂದ ಕೆಲಸ ಕಳೆದಕೊಂಡ ಕಾರ್ಮಿಕರ ಸಂಖ್ಯೆ ಎಷ್ಟು?

3. ಮೈಸೂರು ಜಿಲ್ಲೆಯಲ್ಲಿ ಒಂದು ದಶಕದಿಂದ ಮುಚ್ಚಿರುವ ಕಾರ್ಖಾನೆಗಳ ಸಂಖ್ಯೆ